ಅ) 300 (292 ಪದವಿ ಕಾಲೇಜುಗಳು 8 ಕಾನೂನು ಕಾಲೇಜುಗಳು)

ಆ) 8519

ಇ) ಇಲ್ಲ. ದಿನಾಂಕ 13-2-2001 ರಿಂದ ಜಾರಿಗೆ ಬರುವಂತೆ ಶೇ. 15ರಷ್ಟು ಅನುದಾನದಲ್ಲಿ ಕಡಿತಗೊಳಿಸಲಾಗಿದೆ.

ಈ) ಅನ್ವಯಿಸುವುದಿಲ್ಲ.

ಉ) ಇಲ್ಲ. ಉದ್ಭವಿಸುವುದಿಲ್ಲ.

ಊ) ತಿದ್ದುಪಡಿ ಆದೇಶವನ್ನು ಹೊರಡಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಬೆಂಗಳೂರಿನಲ್ಲಿ ಮೂತ್ರಪಿಂಡ ಮಾರಾಟ.

184(426)

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ: ಸುದರ್ಶನ್ ನೇತೃತ್ವದ ಆರೋಗ್ಯ ಕಾರ್ಯಪಡೆಯು ಬೆಂಗಳೂರಿನಲ್ಲಿ ಮೂತ್ರಪಿಂಡ ಮಾರಾಟದ ಪಿಡುಗು ಹೆಚ್ಚಾಗಿರುವ ಬಗ್ಗೆ ವರದಿ ಸಲ್ಲಿಸಿದೆಯೆ?

ಆ) ಬೆಂಗಳೂರಿನಲ್ಲಿ ಕಳೆದ ನಾಲ್ಕು ವರ್ಷಗಳಿಂದ ಎಷ್ಟು ರಕ್ತ ಸಂಬಂಧಿಗಳಿಲ್ಲದ ವ್ಯಕ್ತಿಗಳು ಮೂತ್ರಪಿಂಡ ದಾನ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಇ) 1994ರ ಮಾನವ ಅಂಗಾಂಗಗಳ ಕಸಿ ಕಾಯಿದೆಯಲ್ಲಿ ''ಭಾವನಾತ್ಮಕ ಸಂಬಂಧಪಟ್ಟ'' ವ್ಯಕ್ತಿಗಳು ಮೂತ್ರಪಿಂಡ ದಾನ ಮಾಡಬಹುದು ಎಂಬ ಅಂಶವನ್ನು ದುರುಪಯೋಗಪಡಿಸಿಕೊಂಡು ಬೆಂಗಳೂರಿನ ಆಸ್ಪತ್ರೆಗಳಲ್ಲಿ ಮೂತ್ರಪಿಂಡ ಕಸಿ ವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಳ್ಳಲ್ಲಿರುವ ಕ್ರಮಗಳೇನು?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಆ) ಆರೋಗ್ಯ ಇಲಾಖೆಯ ಟಾಸ್ಕ್‌ಫೋರ್ಸ್ ಮಧ್ಯಂತರ ವರದಿಯಲ್ಲಿ ಈ ಸಂಬಂಧವಾಗಿ ಕೊಂಚ ನಮೂದಿಸಲಾಗಿದೆ.

ಆ) 651

ಇ) ಬಂದಿಲ್ಲ.

ಈ) ಉದ್ಭವಿಸುವುದಿಲ್ಲ.

ಬೈಲಹೊಂಗಲ ತಾಲ್ಲೂಕಿನ ಬೈಲವಾಡ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕಟ್ಟಡ ಕಟ್ಟುವುದು.

185(172)

ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ(ಬೈಲಹೊಂಗಲ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಬೈಲವಾಡ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲೆಯ ಕಟ್ಟಡದಲ್ಲಿ ನಡೆಯುತ್ತಿರುವುದು ನಿಜವೇ?

ಆ. ಬೈಲಹೊಂಗಲ ತಾಲ್ಲೂಕಿನ ಬೈಲವಾಡ ಗ್ರಾಮದಲ್ಲಿ ಈ ಸರ್ಕಾರಿ ಪದವಿ ಪೂರ್ವ (ಕಾಂಪೋಸಿಟ್) ಕಾಲೇಜಿನ ಕಟ್ಟಡಕ್ಕೆ ಸ್ಥಳವನ್ನು ದಾನ ರೂಪವಾಗಿ ಕೊಟ್ಟಿರುವುದು ನಿಜವೇ?

ಇ. ಹಾಗಿದ್ದಲ್ಲಿ ಈ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಈ ಕಾಲೇಜಿನ ಕಟ್ಟಡ ಕಟ್ಟಲು ಕ್ರಮ ಕೈಕೊಳ್ಳಲಾಗುವುದೇ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ. ಹೌದು.

ಆ. ಇಲಾಖೆಯ ಗಮನಕ್ಕೆ ಬಂದಿಲ್ಲ.

ಇ. ಪ್ರಶ್ನೆ ಉದ್ಭವಿಸುವುದಿಲ್ಲ.